**ಆಕಾಶವಾಣಿ**

**ಪ್ರದೇಶ ಸಮಾಚಾರ**

**ಓದುತ್ತಿರುವವರು ರವಿ ಕುಲಕರ್ಣಿ 09-10-25**

**ಮುಖ್ಯಾಂಶಗಳು**

- **ನಾಡಿಗೆ ಬರುವ ಕಾಡುಪ್ರಾಣಿಗಳ** ಬಗ್ಗೆ ವೈಜ್ಞಾನಿಕ ಅಧ್ಯಯನ ಅಗತ್ಯ–ಮುಖ್ಯಮಂತ್ರಿ ಅಭಿಮತ.

- **ರಾಜ್ಯ ರಸ್ತೆ ಸಾರಿಗೆ ಸಂಸ್ಥೆಗೆ** ಹೊಸದಾಗಿ 900 ಬಸ್‌ಗಳು ಸೇರ್ಪಡೆ– ಸಾರಿಗೆ ಸಚಿವರಿಂದ ಮಾಹಿತಿ.

- **ಉತ್ತರ ಕರ್ನಾಟಕದಲ್ಲಿ** ಭೀಕರ ಪ್ರವಾಹ ಹಿನ್ನೆಲೆ: ಅಧ್ಯಯನಕ್ಕಾಗಿ ಕೇಂದ್ರದ ತಂಡ ಕಳುಹಿಸುವಂತೆ ಪ್ರಧಾನಿಗೆ ಶಾಸಕ ಬಸನಗೌಡ ಪಾಟೀಲ ಯತ್ನಾಳ್ ಪತ್ರ.

- **ಅಂತರ್ಜಲ ವೃದ್ಧಿ ಉದ್ದೇಶದಿಂದ** ರಾಜ್ಯದ 252 ಗ್ರಾಮ ಪಂಚಾಯ್ತಿಗಳಲ್ಲಿ 'ನೀರಿದ್ದರೆ ನಾಳೆ' ಯೋಜನೆ ಜಾರಿ.

**ಈಗ ವಾರ್ತೆಗಳ ವಿವರ**

*******

**ವನ್ಯಜೀವಿಗಳನ್ನು ಕೊಲ್ಲುವವರ** ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಎಚ್ಚರಿಕೆ ನೀಡಿದ್ದಾರೆ. **71ನೇ ವನ್ಯಜೀವಿ** ಸಪ್ತಾಹದ ಸಮಾರೋಪ ಸಮಾರಂಭದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಅದೇ ರೀತಿ, ಯಾರಾದರೂ ಅರಣ್ಯ ಮತ್ತು ಪ್ರಾಣಿ ಸಂಪತ್ತನ್ನು ನಾಶಮಾಡಲು ಮುಂದಾದರೆ ಅಂಥವರ ವಿರುದ್ಧ ಮುಲಾಜಿಲ್ಲದೆ ಕಾನೂನು ಕ್ರಮ ಜರುಗಿಸಲಾಗುವುದು ಎಂದರು. ವನ್ಯಜೀವಿ ಮತ್ತು ಮನು ್ಯರ ನಡುವಿನ ಸಂಘ ್ಷ ತಪ್ಪಿ, ಸಹಬಾಳ್ವೆ ಏರ್ಪಡಬೇಕಾಗಿದೆ. ಕಾಡುಪ್ರಾಣಿಗಳು ನಾಡಿಗೆ ಬರುವ ಬಗ್ಗೆ ವೈಜ್ಞಾನಿಕ ಅಧ್ಯಯನ ನಡೆಸಿ ಸೂಕ್ತ ಪರಿಹಾರ ಕಂಡುಕೊಳ್ಳುವ ಅಗತ್ಯವಿದೆ ಎಂದು ಮುಖ್ಯಮಂತ್ರಿ ಅಭಿಪ್ರಾಯಪಟ್ಟರು.

*******

**ರಾಜ್ಯ ರಸ್ತೆ ಸಾರಿಗೆ ಸಂಸ್ಥೆಗೆ** ಹೊಸದಾಗಿ 900 ಬಸ್‌ಗಳು ಸೇರ್ಪಡೆಗೊಳ್ಳಲಿವೆ ಎಂದು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಹೇಳಿದ್ದಾರೆ. ದಾವಣಗೆರೆ ಜಿಲ್ಲೆ ಚನ್ನಗಿರಿಯಲ್ಲಿ ನೂತನ ಘಟಕ ಉದ್ಘಾಟಿಸಿ ಮಾತನಾಡಿದ ಅವರು, ಈ ಹಿಂದೆ 4 ವ ್ಷ ಬಿಜೆಪಿ ಸರ್ಕಾರದ ಅವಧಿಯಲ್ಲಿ ಒಂದು ಬಸ್ ಕೂಡ ಖರೀದಿ ಮಾಡಿರಲಿಲ್ಲ. ಇದೀಗ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ 5 ಸಾವಿರ ಹೊಸ ಬಸ್ ಖರೀದಿ ಮಾಡಲಾಗಿದ್ದು, 10 ಸಾವಿರ ನೌಕರರ ನೇಮಕಾತಿ ಮಾಡಲಾಗಿದೆ ಎಂದು ಅವರು ಹೇಳಿದರು. ಹಬ್ಬದ ಸಂದರ್ಭಗಳಲ್ಲಿ ಹೆಚ್ಚುವರಿ ಬಸ್‌ಗಳನ್ನು ಓಡಿಸಲಾಗುತ್ತದೆ. ಇಂಥಹ ಸಂದರ್ಭಗಳಲ್ಲಿ ಸಂಸ್ಥೆಯ ಲಾಭಕ್ಕಿಂತ ಜನರಿಗೆ ಅನುಕೂಲವಾಗುವುದು ಮುಖ್ಯ ಎಂದು ಸಚಿವರು ಹೇಳಿದರು.

*******

**ಕಾರ್ಮಿಕ ವರ್ಗದ ಅಭಿವೃದ್ಧಿಗಾಗಿ** ರಾಜ್ಯ ಸರ್ಕಾರ ಹಲವಾರು ಯೋಜನೆಗಳನ್ನು ಯಶಸ್ವಿಯಾಗಿ ಜಾರಿಗೊಳಿಸಿದ್ದು, ಕಾರ್ಮಿಕರು ಯೋಜನೆಗಳ ಸದುಪಯೋಗ ಪಡೆಯಬೇಕು ಎಂದು ಕಾರ್ಮಿಕ ಸಚಿವ ಸಂತೋ ´ ಲಾಡ್ ಮನವಿ ಮಾಡಿದ್ದಾರೆ. ತುಮಕೂರಿನ ಗಣೇಶನಗರದಲ್ಲಿ 3.20 ಕೋಟಿ ರೂಪಾಯಿ ವೆಚ್ಚದಲ್ಲಿ ನೂತನವಾಗಿ ನಿರ್ಮಿಸಿರುವ ಕಾರ್ಮಿಕ ಭವನ ಉದ್ಘಾಟಿಸಿ ಮಾತನಾಡಿದ ಅವರು, ಕಾರ್ಮಿಕರ ಮಕ್ಕಳ ಶಿಕ್ಷಣ, ಆರೋಗ್ಯ ಮತ್ತು ವಸತಿ ಸೌಲಭ್ಯಗಳಿಗೆ ಸರ್ಕಾರ ಹೆಚ್ಚು ಪ್ರಾಮುಖ್ಯತೆ ನೀಡುತ್ತಿದೆ. ಕಾರ್ಮಿಕರ ಅನುಕೂಲಕ್ಕಾಗಿ ಈ ಕಾರ್ಮಿಕ ಭವನ ನಿರ್ಮಿಸಲಾಗಿದ್ದು, ಮುಂದಿನ ದಿನಗಳಲ್ಲಿ ಕಾರ್ಮಿಕರ ಸಭೆ, ತರಬೇತಿ ಶಿಬಿರಗಳಿಗೆ ಭವನ ಉತ್ತಮ ವೇದಿಕೆಯಾಗಿ ಉಪಯೋಗವಾಗಲಿದೆ ಎಂದು ಹೇಳಿದರು.

*******

**ಚಿಕ್ಕಬಳ್ಳಾಪುರ ಜಿಲ್ಲೆ ಚಿಂತಾಮಣಿ ತಾಲ್ಲೂಕಿನ** ನೆಕ್ಕುಂದಿ ಕೆರೆಯನ್ನು 84 ಕೋಟಿ ರೂಪಾಯಿಗಳ ವೆಚ್ಚದಲ್ಲಿ ಅಭಿವೃದ್ಧಿಪಡಿಸಲಾಗುವುದು ಎಂದು ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ.ಸುಧಾಕರ್ ತಿಳಿಸಿದ್ದಾರೆ. ಚಿಂತಾಮಣಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನೆಕ್ಕುಂದಿ ಕೆರೆ ತಾಲ್ಲೂಕಿನ ದೊಡ್ಡ ಜಲ ಮೂಲವಾಗಿದೆ. ಈ ಕೆರೆಯನ್ನು ಅಭಿವೃದ್ಧಿಪಡಿಸಲು ಸರ್ಕಾರ 84 ಕೋಟಿ ರೂಪಾಯಿಗಳನ್ನು ಮಂಜೂರು ಮಾಡಿದ್ದು, ಈ ಕೆರೆ ಪ್ರತಿನಿತ್ಯ 15 ರಿಂದ 20 ಲಕ್ಷ ಲೀಟರ್ ನೀರು ಪೂರೈಸುವ ಸಾಮರ್ಥ್ಯ ಹೊಂದಿದೆ. ಎತ್ತಿನಹೊಳೆ ನೀರು ಶೇಖರಣೆ ಮೂಲಕ ಇಡೀ ಕ್ಷೇತ್ರಕ್ಕೆ ಕುಡಿಯುವ ನೀರನ್ನು ಪೂರೈಸಲು ನೆಕ್ಕುಂದಿಕೆರೆ ಆಧಾರವಾಗಲಿದೆ ಎಂದು ಸಚಿವರು ಹೇಳಿದರು.

*******

**ಉತ್ತರ ಕರ್ನಾಟಕದಲ್ಲಿ** ಭೀಕರ ಪ್ರವಾಹ ಹಿನ್ನೆಲೆ, ಸೂಕ್ತ ಪರಿಹಾರ ಕ್ರಮಗಳನ್ನು ಕೈಗೊಳ್ಳುವಲ್ಲಿ ರಾಜ್ಯ ಸರ್ಕಾರ ವಿಫಲವಾಗಿದೆ ಎಂದು ವಿಜಯಪುರ ಶಾಸಕ ಬಸನಗೌಡ ಪಾಟೀಲ ಯತ್ನಾಳ ಆರೋಪಿಸಿದ್ದಾರೆ. ಈ ಕುರಿತು ಪ್ರಧಾನ ಮಂತ್ರಿ ಅವರಿಗೆ ಪತ್ರ ಬರೆದಿರುವ ಅವರು, ಉತ್ತರ ಕರ್ನಾಟಕ ಭಾಗದಲ್ಲಿ ಭೀಕರ ಪ್ರವಾಹ ಉಂಟಾಗಿದೆ. ರಾಜ್ಯ ಕಾಂಗ್ರೆಸ್ ಸರ್ಕಾರ ಸೂಕ್ತ ಕಾಳಜಿ ವಹಿಸಿಲ್ಲ. ಸೂಕ್ತ ಪರಿಹಾರ ಕ್ರಮಗಳನ್ನ ಕೈಗೊಂಡಿಲ್ಲ. ಕೂಡಲೇ ಕೇಂದ್ರ ಸರ್ಕಾರ ಮಧ್ಯ ಪ್ರವೇಶಿಸಿ ತುರ್ತು ಪರಿಹಾರ ಕ್ರಮಗಳನ್ನು ಕೈಗೊಳ್ಳುವಂತೆ ಒತ್ತಾಯಿಸಿದ್ದಾರೆ. ಭೀಮಾ ನದಿ ಮಹಾಪೂರದಿಂದ ಜನರಿಗೆ ಸಂಕ ್ಟ ಎದುರಾಗಿದೆ. ಉತ್ತರ ಕರ್ನಾಟಕದ 117 ಗ್ರಾಮಗಳ, 10 ಸಾವಿರಕ್ಕೂ ಅಧಿಕ ಜನರು ಪ್ರವಾಹದಿಂದ ಸಂಕಷ್ಟಕ್ಕೊಳಗಾಗಿದ್ದಾರೆ. 547 ಮನೆಗಳು ಜಲಾವೃತ್ತಗೊಂಡಿವೆ. ಸರ್ಕಾರ ಪ್ರವಾಹ ನಿರ್ವಹಣೆ ಸರಿಯಾಗಿ ಮಾಡಿಲ್ಲ. ಪ್ರವಾಹ ಅಧ್ಯಯನಕ್ಕಾಗಿ ಕೇಂದ್ರದ ತಂಡ ಕಳುಹಿಸುವಂತೆ ಶಾಸಕ ಯತ್ನಾಳ್ ಪತ್ರದಲ್ಲಿ ಮನವಿ ಮಾಡಿದ್ದಾರೆ.

*******

**ರಾಜ್ಯದಲ್ಲಿ ನಡೆಯುತ್ತಿರುವುದು** ಜಾತಿ ಗಣತಿ ಅಲ್ಲ. ಅದು ರಾಜ್ಯದ ಏಳು ಕೋಟಿ ಜನರ ಸಾಮಾಜಿಕ, ಆರ್ಥಿಕ ಶೈಕ್ಷಣಿಕ ಸಮೀಕ್ಷೆಯಾಗಿದೆ ಎಂದು ವಿಧಾನ ಪರಿ ´ತ್ ಮಾಜಿ ಸಭಾಪತಿ ವಿ.ಆರ್.ಸುದರ್ಶನ್ ಹೇಳಿದ್ದಾರೆ. ಮಂಗಳೂರಿನಲ್ಲಿ

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜಕೀಯ ಕಾರಣಗಳಿಗೋಸ್ಕರ ಬಿಜೆಪಿ ನಾಯಕರು ಸಮೀಕ್ಷೆ ಬಗ್ಗೆ ವಿರೋಧ ವ್ಯಕ್ತಪಡಿಸುತ್ತಿದ್ದಾರೆ. ಸಮೀಕ್ಷೆ ಸುಪ್ರೀಂ ಕೋರ್ಟ್ ನಿರ್ದೇಶನದ ಮೇರೆಗೆ ಸಮೀಕ್ಷೆ ನಡೆಯುತ್ತಿದ್ದು, ಹಿಂದುಳಿದ ವರ್ಗಗಳ ಸಮುದಾಯಗಳಲ್ಲಿ ಸಂವಿಧಾನ ಬದ್ಧ ಹಕ್ಕುಗಳ ಬಗ್ಗೆ ಜಾಗೃತಿ ಮೂಡಿಸುವ ಉದ್ದೇಶದಿಂದ 10 ವರ್ಷಗಳಿಗೊಮ್ಮೆ ನಡೆಸಲಾಗುವ ಸಮೀಕ್ಷೆ ಇದಾಗಿದೆ. ಸಮೀಕ್ಷೆ ವಿರೋಧಿಸುವುದು ಜನ ವಿರೋಧಿ ಕೃತ್ಯ ಎಂದರು

*******

ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲಿ ಯಾವುದೇ ರೀತಿಯ ಔಷಧಿಗಳ ಕೊರತೆ ಎದುರಾಗದಂತೆ ಸರ್ಕಾರ ಎಚ್ಚರಿಕೆ ವಹಿಸುವುದು ಅಗತ್ಯ ಎಂದು ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಹೇಳಿದ್ದಾರೆ. ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆಗೆ ಭೇಟಿ ನೀಡಿ ಅಲ್ಲಿನ ಸೌಲಭ್ಯಗಳನ್ನು ಪರಿಶೀಲಿಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಶೇಕಡ 75ರಷ್ಟು ಔಷಧಿಗಳು ಲಭ್ಯವಿದ್ದು, ಉಳಿದ ಔಷಧಿಗಳನ್ನು ಸರ್ಕಾರ ಪೂರೈಕೆ ಮಾಡಬೇಕಾಗಿದೆ. ಬಡವರಿಗೆ ಔಷಧಿ ಅಂಗಡಿಗಳಲ್ಲಿ ಕೊಳ್ಳುವ ಶಕ್ತಿ ಇರುವುದಿಲ್ಲ. ಹೀಗಾಗಿ ಅದನ್ನು ಗಮನಿಸಿ ಸರ್ಕಾರ, ಔಷಧಿ ಪೂರೈಕೆ ಮಾಡಬೇಕು. ಆಸ್ಪತ್ರೆಯಲ್ಲಿ ಸ್ವಚ್ಛತೆ ಕಡೆಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಅವರು ಹೇಳಿದರು.

*******

**ಈಗ ಪ್ರಕಟಣೆ.. ನಂತರ ಪ್ರದೇಶ ಸಮಾಚಾರ ಮುಂದುವರಿಯುವುದು..**
**ಪ್ರಕಟಣೆ-32 ಸೆಕೆಂಡ್ಸ್**
**ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ..**
*******

**ಶಿಕ್ಷಣದ ಉದ್ದೇಶ ಕೇವಲ** ಜ್ಞಾನ ಗಳಿಸುವುದಲ್ಲ, ಅದನ್ನು ಸಮಾಜದ ಕಲ್ಯಾಣಕ್ಕಾಗಿ ಉಪಯೋಗಿಸುವುದಾಗಿದೆ ಎಂದು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅಭಿಪ್ರಾಯಪಟ್ಟಿದ್ದಾರೆ. ಬೆಂಗಳೂರು ವಿಶ್ವವಿದ್ಯಾನಿಲಯದ 60 ನೇ ಘಟಿಕೋತ್ಸವದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ವಿದ್ಯಾರ್ಥಿಗಳು ಶಿಕ್ಷಣದಲ್ಲಿ ಪಡೆಯುವ ಜ್ಞಾನವನ್ನು ಉತ್ತಮ ಸಮಾಜ ನಿರ್ಮಾಣ ಹಾಗೂ ದೇಶದ ಅಭಿವೃದ್ಧಿಗೆ ಬಳಸಿಕೊಳ್ಳಬೇಕು ಎಂದರು. ಮೇಕ್ ಇನ್ ಇಂಡಿಯಾ, ಡಿಜಿಟಲ್ ಇಂಡಿಯಾ, ಸ್ಟಾರ್ಟ್‌ಅಪ್ ಇಂಡಿಯಾ, ಸ್ಟ್ಯಾಂಡ್ ಅಪ್ ಇಂಡಿಯಾ, ವೆಂಚರ್ ಕ್ಯಾಪಿಟಲ್ ಫಂಡ್ ಯೋಜನೆಗಳ ಅವಕಾಶಗಳನ್ನು ಬಳಸಿಕೊಂಡು ನವ ಭಾರತ ಮತ್ತು ಸ್ವಾವಲಂಬಿ ಭಾರತ ನಿರ್ಮಾಣಕ್ಕೆ ಯುವಕರು ಮುಂದಾಗಬೇಕು ಎಂದು ಕರೆ ನೀಡಿದರು.

*******

**ಎಸ್ಸೆಸ್ಸೆಲ್ಸಿ ಫಲಿತಾಂಶ ಸುಧಾರಣೆಗೆ** ಬಳ್ಳಾರಿ ಜಿಲ್ಲಾ ಪಂಚಾಯಿತಿ ರಾಜ್ಯದಲ್ಲಿಯೇ ಮೊದಲ ಬಾರಿಗೆ ಗ್ರಾಮ ಪಂಚಾಯ್ತಿಗಳ ಗ್ರಂಥಾಲಯಗಳಲ್ಲಿ ಅರಿವು ಕೇಂದ್ರಗಳಲ್ಲಿ. ಆನ್ ಲೈನ್ ಸ್ಮಾರ್ಟ್ ಕ್ಲಾಸ್‌ಗಳನ್ನು ಆರಂಭಿಸಿದೆ. ಗ್ರಾಮೀಣ ಭಾಗದ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳ ಕಲಿಕಾ ಸುಧಾರಣೆಗೆ ಜಿಲ್ಲೆಯ 100 ಗ್ರಾಮ ಪಂಚಾಯ್ತಿಗಳ ವ್ಯಾಪ್ತಿಯಲ್ಲಿ ಸ್ಮಾರ್ಟ್ ಕ್ಲಾಸ್ ಯೋಜನೆ ರೂಪಿಸಲಾಗಿದೆ. ಗ್ರಂಥಾಲಯಗಳಲ್ಲಿನ ಸ್ಮಾರ್ಟ್ ಕ್ಲಾಸ್‌ಗಳಿಗೆ ಗ್ರಾಮೀಣ ಮಕ್ಕಳಿಂದ ಉತ್ತಮ ಪ್ರತಿಕ್ರಿಯೆ ಇದೆ. ರಜೆ ಬಳಿಕವೂ ಈ

ಸ್ಮಾರ್ಟ್ ಕ್ಲಾಸ್‌ಗಳನ್ನು ಮುಂದುವರಿಸುವ ಚಿಂತನೆ ಇದೆ ಎಂದು ಜಿಲ್ಲಾ ಪಂಚಾಯ್ತಿ ಕಾರ್ಯ ನಿರ್ವಹಣಾಧಿಕಾರಿ ಮಹಮ್ಮದ್ ಹ್ಯಾರಿಸ್ ಸುಮ್ಮೈರ್ ತಿಳಿಸಿದ್ದಾರೆ.

*******

**ಅಂತರ್ಜಲ ಅತಿಬಳಕೆಯ** ಪಟ್ಟಿಯಲ್ಲಿರುವ ರಾಜ್ಯದ 252 ಗ್ರಾಮ ಪಂಚಾಯ್ತಿಗಳಲ್ಲಿ "ನೀರಿದ್ದರೆ ನಾಳೆ" ಯೋಜನೆ ಜಾರಿಗೊಳಿಸಲಾಗುವುದು. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ ಈ ವಿಷಯ ತಿಳಿಸಿದ ಸಣ್ಣ ನೀರಾವರಿ ಸಚಿವ ಎನ್ ಎಸ್ ಭೋಸರಾಜು, ಜಲಮೂಲಗಳನ್ನು ಸಂರಕ್ಷಿಸುವ ಮೂಲಕ ಅಂತರ್ಜಲ ಮಟ್ಟ ವೃದ್ಧಿಸಿ, ಸಮೃದ್ಧ ಕರ್ನಾಟಕ ನಿರ್ಮಾಣಕ್ಕೆ ಭದ್ರ ಅಡಿಪಾಯ ಹಾಕುವ ಉದ್ದೇಶದಿಂದ "ನೀರಿದ್ದರೆ ನಾಳೆ" ಎನ್ನುವ ವಿನೂತನ ಕಾರ್ಯಕ್ರಮ ರೂಪಿಸಲಾಗಿದೆ ಎಂದರು. ಮೊದಲ ಹಂತದಲ್ಲಿ ರಾಜ್ಯದ 16 ಜಿಲ್ಲೆಗಳ 27 ತಾಲ್ಲೂಕುಗಳ 525 ಅಂತರ್ಜಲ ಅತಿಬಳಕೆ ಗ್ರಾಮ ಪಂಚಾಯತಿಗಳಲ್ಲಿ ಈ ಯೋಜನೆ ಅನುಷ್ಠಾನಗೊಳಿಸಲಾಗುತ್ತಿದೆ. ಈ ಪೈಕಿ ಕಲ್ಯಾಣ ಕರ್ನಾಟಕ ಭಾಗದ 100ಕ್ಕೂ ಹೆಚ್ಚು ಅಂತರ್ಜಲ ಅತಿಬಳಕೆ ಗ್ರಾಮ ಪಂಚಾಯತಿಗಳಿವೆ ಎಂದು ಅವರು ಹೇಳಿದರು.

*******

**ವಿಶೇಷಚೇತನರ ಸಬಲೀಕರಣ** ಮತ್ತು ಎಲ್ಲರನ್ನು ಒಳಗೊಳ್ಳುವ ಸಮಾಜ ಉತ್ತೇಜಿಸುವ ಉದ್ದೇಶದಿಂದ ಮೊಟ್ಟ ಮೊದಲ ಬಾರಿಗೆ ಬೆಂಗಳೂರಿನಲ್ಲಿ ಡಿಸೆಂಬರ್ ತಿಂಗಳಲ್ಲಿ ಮೂರು ದಿನಗಳ "ಪರ್ಪಲ್ ಫೆಸ್ಟ್" ಉತ್ಸವ ಸರ್ಕಾರ ಆಯೋಜಿಸಲಿದೆ. ಬೆಂಗಳೂರಿನಲ್ಲಿ ಈ ವಿಷಯ ತಿಳಿಸಿದ ಅಂಗವಿಕಲ ವ್ಯಕ್ತಿಗಳ ಹಕ್ಕುಗಳ ಅಧಿನಿಯಮ ರಾಜ್ಯ ಆಯುಕ್ತ ದಾಸ್ ಸೂರ್ಯವಂಶಿ, ವಿಶೇಷಚೇತನರಿಗೆ ಶಿಕ್ಷಣ, ಕೌಶಲ್ಯ ಮತ್ತು ಉದ್ಯೋಗ ಸೃಷ್ಟಿಗೆ ಬೆಂಬಲ ನೀಡಲು ಈ "ಪರ್ಪಲ್ ಫೆಸ್ಟ್" ಮುಖ್ಯ ಪಾತ್ರ ವಹಿಸಲಿದೆ. ಅಲ್ಲದೆ ವಿಶೇಷಚೇತನರಲ್ಲಿರುವ ಪ್ರತಿಭೆಗಳನ್ನು ಅನಾವರಣಗೊಳಿಸಲು ಅವಕಾಶ ಕಲ್ಪಿಸಲಿದ್ದು, ಕಾರ್ಯಕ್ರಮದಲ್ಲಿ ಸುಮಾರು 1 ಲಕ್ಷ ಜನರು ಭಾಗವಹಿಸುವ ನಿರೀಕ್ಷೆ ಇದೆ ಎಂದರು. ಸಭೆಯಲ್ಲಿ ಸ್ವಯಂ ಸೇವಾ ಸಂಸ್ಥೆಗಳ ಪ್ರತಿನಿಧಿಗಳನ್ನು ಒಳಗೊಂಡ ವಿವಿಧ ಸಮಿತಿಗಳನ್ನು ರಚಿಸಲು ತೀರ್ಮಾನಿಸಲಾಯಿತು. ಎಂದು ಅವರು ಹೇಳಿದರು.

*******

**ರಾಜ್ಯ ಸರ್ಕಾರದ ಮಹತ್ವದ** ವಿಕೇಂದ್ರೀಕರಣ ಯೋಜನೆ ಅನುಷ್ಠಾನದ ಭಾಗವಾಗಿ ಕಿತ್ತೂರು ಕರ್ನಾಟಕದ ಎಲ್ಲ ಜಿಲ್ಲೆಗಳ 2026–27 ನೇ ಸಾಲಿನ ಅಭಿವೃದ್ಧಿ ಯೋಜನೆಗಳ ಕರಡು ಪ್ರತಿ ತಯಾರಿಕೆ ಪ್ರಗತಿ ಪರಿಶೀಲನೆ ಸಭೆ ಗದಗನ ಮಹಾತ್ಮಾ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದಲ್ಲಿ ನಡೆಯಿತು.

*******

**ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು**

**ನಾಡಿಗೆ ಬರುವ ಕಾಡುಪ್ರಾಣಿಗಳ** ಬಗ್ಗೆ ವೈಜ್ಞಾನಿಕ ಅಧ್ಯಯನ ಅಗತ್ಯ–ಮುಖ್ಯಮಂತ್ರಿ ಅಭಿಮತ.

**ರಾಜ್ಯ ರಸ್ತೆ ಸಾರಿಗೆ ಸಂಸ್ಥೆಗೆ** ಹೊಸದಾಗಿ 900 ಬಸ್‌ಗಳು ಸೇರ್ಪಡೆ–ಸಾರಿಗೆ ಸಚಿವರಿಂದ ಮಾಹಿತಿ.

**ಉತ್ತರ ಕರ್ನಾಟಕದಲ್ಲಿ** ಭೀಕರ ಪ್ರವಾಹ ಹಿನ್ನೆಲೆ: ಅಧ್ಯಯನಕ್ಕಾಗಿ ಕೇಂದ್ರದ ತಂಡ ಕಳುಹಿಸುವಂತೆ ಪ್ರಧಾನಿಗೆ ಶಾಸಕ ಬಸನಗೌಡ ಪಾಟೀಲ ಯತ್ನಾಳ್ ಪತ್ರ.

**ಅಂತರ್ಜಲ ವೃದ್ಧಿ ಉದ್ದೇಶದಿಂದ** ರಾಜ್ಯದ 252 ಗ್ರಾಮ ಪಂಚಾಯ್ತಿಗಳಲ್ಲಿ 'ನೀರಿದ್ದರೆ ನಾಳೆ' ಯೋಜನೆ ಜಾರಿ.

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು**

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಿಗ್ಗೆ 7 ಗಂಟೆ 35 ನಿಮಿಷಕ್ಕೆ**

**********